# ಕರ್ನಾಟಕ ಸರ್ಕಾರದ ನಡವಳಿಗಳು

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಬೆಂಗಳೂರು
ಸಂ. 2712
ದಿ. 24.07.12

ವಿಷಯ: ಮೆ॥ ಮಂಚುಕೊಂಡ ಆಗ್ರೋಟೆಕ್ ಪ್ರೈವೇಟ್ ಲಿಮಿಟೆಡ್ ರವರಿಗೆ ರಾಯಚೂರು ಜಿಲ್ಲೆಯ ರಾಯಚೂರು ಗ್ರೋಥ್ ಸೆಂಟರ್‌ನಲ್ಲಿ 5.00 ಮೆ.ವ್ಯಾ. (ಗ್ರಾಸ್) ಹಾಗೂ 2.00 ಮೆ.ವ್ಯಾ (ಎಕ್ಸ್‌ಪೋರ್ಟೆಬಲ್) ಸಾಮರ್ಥ್ಯದ ಜೈವಿಕ ಇಂಧನ ಆಧಾರಿತ ಸಹ-ವಿದ್ಯುತ್ ಘಟಕ ಸ್ಥಾಪನೆಗೆ ನಿರಾಕ್ಷೇಪಣೆ ನೀಡುವ ಕುರಿತು.

ಓದಲಾಗಿದೆ: 1. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಬಯೋ& ಕೋಜೆನ್/ಎಂ.ಎ.ಎನ್:ಎಫ್-193/2012-13/802 ದಿನಾಂಕ: 30.06.2012.

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ॥ ಮಂಚುಕೊಂಡ ಆಗ್ರೋಟೆಕ್ ಪ್ರೈವೇಟ್ ಲಿಮಿಟೆಡ್ ರವರಿಗೆ ರಾಯಚೂರು ಜಿಲ್ಲೆಯ ರಾಯಚೂರು ಗ್ರೋಥ್ ಸೆಂಟರ್‌ನಲ್ಲಿ 5.00 ಮೆ.ವ್ಯಾ. (ಗ್ರಾಸ್) ಹಾಗೂ 2.00 ಮೆ.ವ್ಯಾ (ಎಕ್ಸ್‌ಪೋರ್ಟೆಬಲ್) ಸಾಮರ್ಥ್ಯದ ಜೈವಿಕ ಇಂಧನ ಆಧಾರಿತ ಸಹ-ವಿದ್ಯುತ್ ಘಟಕ ಸ್ಥಾಪಿಸಲು ನಿರಾಕ್ಷೇಪಣೆಯನ್ನು ನೀಡುವಂತೆ ಸರ್ಕಾರಕ್ಕೆ ಶಿಫಾರಸು ಮಾಡಿ ಪ್ರಸ್ತಾವನೆಯನ್ನು ಕಳುಹಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರದ ಆದೇಶ ಸಂಖ್ಯೆ: ಇಎನ್ 206 ಎನ್‌ಸಿಇ 2012,**
**ಬೆಂಗಳೂರು, ದಿನಾಂಕ: 19.07.2012.**

ಮೆ॥ ಮಂಚುಕೊಂಡ ಆಗ್ರೋಟೆಕ್ ಪ್ರೈವೇಟ್ ಲಿಮಿಟೆಡ್ ರವರಿಗೆ ರಾಯಚೂರು ಜಿಲ್ಲೆಯ ರಾಯಚೂರು ಗ್ರೋಥ್ ಸೆಂಟರ್‌ನಲ್ಲಿ 5.00 ಮೆ.ವ್ಯಾ. (ಗ್ರಾಸ್) ಹಾಗೂ 2.00 ಮೆ.ವ್ಯಾ (ಎಕ್ಸ್‌ಪೋರ್ಟೆಬಲ್) ಸಾಮರ್ಥ್ಯದ ಜೈವಿಕ ಇಂಧನ ಆಧಾರಿತ ಸಹ-ವಿದ್ಯುತ್ ಘಟಕ ಸ್ಥಾಪಿಸಲು ಈ ಕೆಳಗಿನ ಷರತ್ತಿಗೊಳಪಟ್ಟು **ನಿರಾಕ್ಷೇಪಣೆಯನ್ನು** ನೀಡಲಾಗಿದೆ :-

1. ಅಭಿವೃದ್ಧಿದಾರರು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಿಂದ ವಿದ್ಯುತ್ ರವಾನೆ ವ್ಯವಸ್ಥೆ ಸಂಬಂಧ (Evacuation of Power) ಪ್ರತ್ಯೇಕವಾಗಿ ಅನುಮೋದನೆ ಪಡೆಯತಕ್ಕದ್ದು.

2. ಅಭಿವೃದ್ಧಿದಾರರು ಗುಲ್ಬರ್ಗಾ ವಿದ್ಯುತ್ ಸರಬಜಾರು ಕಂಪನಿಯೊಂದಿಗೆ 2.00 ಮೆ.ವ್ಯಾ. ವಿದ್ಯುತ್ ಸರಬರಾಜಿಗೆ ಸಂಬಂಧಿಸಿದಂತೆ ವಿದ್ಯುತ್ ಖರೀದಿ ಒಪ್ಪಂದವನ್ನು (ಪಿಪಿಎ) ಮಾಡಿಕೊಳ್ಳತಕ್ಕದ್ದು

3. ಈ ಘಟಕಕ್ಕೆ ಸಂಬಂಧಿಸಿದಂತೆ ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆಯ ಅವಶ್ಯಕತೆಯಿದೆಯೋ ಅಂದರೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ/ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತಿತರ ಇಲಾಖೆಗಳಿಂದ ಅನುಮೋದನೆ ಪಡೆಯತಕ್ಕದ್ದು.

4. ಈ ಘಟಕವನ್ನು ಅನುಷ್ಠಾನಗೊಳಿಸುವ ಮುನ್ನ ಅಭಿವೃದ್ಧಿದಾರರು ವಿಸ್ತೃತ ಯೋಜನಾ ವರದಿಯನ್ನು (ಡಿ.ಪಿ.ಆರ್.) ತಯಾರಿಸಿ ಕೆ.ಆರ್.ಇ.ಡಿ.ಎಲ್. ಸಂಸ್ಥೆಯಿಂದ ಅನುಮೋದನೆ ಪಡೆಯತಕ್ಕದ್ದು.

AGM(H)
T.O (Biomass)
24/7

.........2)

ಸದರಿ ಆದೇಶವನ್ನು ರದ್ದು ಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೌಸಲ್ಯಾ) 19/7/12
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.
19/7

**ಇವರಿಗೆ:**
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಜಲ ಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು-1.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
3. ಉಪ ಅರಣ್ಯ ಸಂರಕ್ಷಣಾಧಿಕಾರಿ ರಾಯಚೂರು ಜಿಲ್ಲೆ, ರಾಯಚೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
5. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಾರ್ಪೊರೇಟ್ ಕಛೇರಿ, ಸ್ಟೇಷನ್ ರಸ್ತೆ, ಪರಿವಾರ್ ಹೋಟೆಲ್ ಎದುರುಗಡೆ, ಗುಲ್ಬರ್ಗಾ-585 102.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ: 39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
7. ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ, ರಾಯಚೂರು.
8. ಮೆ: ಮಂಚುಕೊಂಡ ಆಗ್ರೋಟೆಕ್ ಪ್ರೈ.ಲಿ., ರಾಯಚೂರು ಗ್ರೋಥ್ ಸೆಂಟರ್, ಇಂಡಸ್ಟ್ರೀಯಲ್ ಏರಿಯಾ ರಾಯಚೂರು ಜಿಲ್ಲೆ, ರಾಯಚೂರು – 584 101.,
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
11. ಶಾಖಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.